(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವನೆ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯ್ಲಿ:- (ಮುಖ್ಯಮಂತ್ರಿಗಳು) ''1993ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ನಂ.2)ವಿಧೇಯಕವನ್ನು ಅಂಗಿಕರಿಸಬೇಕೆಂದು ಕೋರುತ್ತೇನೆ.''

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ ''1993ನೇ ಇಸವಿಯ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು

ಕರ್ನಾಟಕ ಧನ ವಿನಿಯೋಗ ವಿಧೇಯಕ (ನಂ.3) 1993

ಶ್ರೀ ಎಂ. ವೀರಪ್ಪ ಮೊಯ್ಲಿ:- (ಮುಖ್ಯಮಂತ್ರಿಯವರು) ಮಾನ್ಯ ಅಧ್ಯಕ್ಷರೇ, ''1993ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.''

ಪ್ರಸ್ತಾಪವನ್ನು ಮಂಡಿಸಲಾಯಿತು

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ ''1993ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಪರ್ಯಾಲೋಚಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು:- ಖಂಡ 2 ಮತ್ತು ಮೂರನೆಯ ಖಂಡಗಳು ವಿಧೇಯಕದ ಅಂಗವಾಗಿರುತ್ತವೆ.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವವನ್ನು ಅಂಗೀಕರಿಸಲಾಯಿತು.

(ಮೊದಲನೆಯ ಖಂಡ ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧನಿಯಮಗೊಳಿಸುವ ಸೂಕ್ತ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ.ಎಂ.ವೀರಪ್ಪ ಮೊಯಿಲಿ(ಮುಖ್ಯಮಂತ್ರಿಗಳು):- '' 1993ನೇ ಇಸವಿಯ ಧನ ವಿನಿಯೋಗ (ನಂ. 3) ವಿಧೇಯಕವನ್ನು ಈ ಸಭೆಯು ಅಂಗಿಕರಿಸಬೇಕೆಂದು ಕೋರುತ್ತೇನೆ.''

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ ''1993ನೇ ಇಸವಿಯ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಅಂಗಿಕರಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಜಂಟಿ ಸಮಿತಿ ಕಾಲಾವಧಿ ವಿಸ್ತರಣೆಯ ಪ್ರಸ್ತಾವ.

ವಿಷಯ: ಸಣ್ಣ ಖನಿಜ ಸಂಪತ್ತಿನ ನೀತಿಯನ್ನು ರೂಪಿಸಲು ನೇಮಿಸಿದ್ದ ಸದನದ ಜಂಟಿ ಸಮಿತಿಯ ಕಾಲಾವಧಿ ವಿಸ್ತರಣೆ ಬಗ್ಗೆ.

ಶ್ರೀ.ಡಿ.ಎ. ಚಿನ್ನಪ್ಪ:-(ಗಣಿ ಮತ್ತು ಭೂ ವಿಜ್ಞಾನ ಸಚಿವರು) ಮಾನ್ಯ ಅಧ್ಯಕ್ಷರೆ, ''ಸಣ್ಣ ಖನಿಜ ಸಂಪತ್ತಿನ ನೀತಿಯನ್ನು ಸೂಕ್ತವಾಗಿ ರೂಪಿಸಿಕೊಳ್ಳುವುದಕ್ಕೆ ಖಚಿತಪಡಿಸಿಕೊಳ್ಳುವುದಕ್ಕಾಗಿ ಸರ್ಕಾರಕ್ಕೆ ಸಲಹೆ ನೀಡಲು ರಚಿಸಲಾದ ಉಭಯ ಸದನದ ಜಂಟಿ ಸಮಿತಿಗೆ ಸಂಬಂಧಿಸಿದಂತೆ ಸಮಿತಿಯ ವರದಿಯನ್ನು ಒಪ್ಪಿಸಲು ಜೂನ್ 1993ರ ಅಂತ್ಯದವರೆಗೆ ಕಾಲಾವಕಾಶವನ್ನು ವಿಸ್ತರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,:-''ಸಣ್ಣ ಖನಿಜ ಸಂಪತ್ತಿನ ನೀತಿಯನ್ನು ಸೂಕ್ತವಾಗಿ ರೂಪಿಸಿಕೊಳ್ಳುವುದಕ್ಕೆ ಖಚಿತ ಪಡಿಸಿಕೊಳ್ಳುವುದಕ್ಕಾಗಿ ಸರ್ಕಾರಕ್ಕೆ ಸಲಹೆ ನೀಡಲು ರಚಿಸಲಾದ ಉಭಯ ಸದನದ ಜಂಟಿ ಸಮಿತಿಗೆ ಸಂಬಂಧಿಸಿದಂತೆ ಸಮಿತಿಯ ವರದಿಯನ್ನು ಒಪ್ಪಿಸಲು ಜೂನ್ 1993ರ ಅಂತ್ಯದವರೆಗೆ ಕಾಲಾವಕಾಶ ವಿಸ್ತರಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ ಕಾಲಾವಕಾಶವನ್ನು ವಿಸ್ತರಿಸಲಾಯಿತು.

ಅಧ್ಯಕ್ಷರು:-ಈಗ ಸದನ ಮುಂದುವರೆದು ಮತ್ತೆ ನಾಳೆ ಬೆಳಿಗ್ಗೆ 11-00ಗಂಟೆಗೆ ಸೇರುವುದು.

(ಸದನವು ಸಂಜೆ 6ಗಂಟೆ 2 ನಿಮಿಷಕ್ಕೆ ಮುಕ್ತಾಯಗೊಂಡು ದಿನಾಂಕ 31-3-1993ರಂದು ಬೆಳಿಗ್ಗೆ ಪುನಃ 11-00ಗಂಟೆಗೆ ಸೇರಲು ನಿಶ್ಚಯಿಸಿತು)

(ಈ ಚಿಹ್ನೆ ಮಾನ್ಯ ಸದಸ್ಯ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ).